ಕರ್ನಾಟಕ ಸರ್ಕಾರ
(ಕನ್ನಡ ಮತ್ತು ಸಂಸ್ಕೃತಿ ಇಲಾಖೆ)
**ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಸಿದ್ಧಾರ್ಥನಗರ, ಮೈಸೂರು**
Chamarajendra Government College of Visual Arts [CAVA], Siddarthanagar, Mysuru
Phone: 0821-2438931, 2438930 e-Mail : deancava@gmail.com

ಸಂಖ್ಯೆ ಸಿಎವಿ/ಇಎಸ್‌ಟಿ(2)/ಸಿಆರ್ 64/2023-24 ದಿನಾಂಕ 16-10-2023

# ಪತ್ರಿಕಾ ಪ್ರಕಟಣೆ

ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಮೈಸೂರು ಸಂಸ್ಥೆಯ 2023-24 ನೇ ಶೈಕ್ಷಣಿಕೆ ಸಾಲಿಗೆ ಮಾತ್ರ ಅತಿಥಿ ಉಪನ್ಯಾಸಕ / ಸಂಪನ್ಮೂಲ ವ್ಯಕ್ತಿಗಳಾಗಿ ಬೋಧನೆ ಮಾಡಲು ಇಚ್ಛಿಸುವ ಅಭ್ಯರ್ಥಿಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿಗಧಿಪಡಿಸಿದ ಸಂಚಿತ ಸಂಭಾವನೆ / ಗೌರವಧನ ಆಧಾರದ ಮೇಲೆ ಕಾರ್ಯನಿರ್ವಹಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಈ ಕೆಳಕಂಡ ವಿಷಯಗಳ ಕುರಿತು 3 ನೇ ಬಾರಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರ ಸಂ | ವಿಷಯ (ಬಿವಿಎ / ಎಂವಿಎ ವಿದ್ಯಾರ್ಥಿಗಳು ಸೇರಿದಂತೆ) | ಬೋಧನಾ ವಿಷಯ | ನಿಗಧಿಪಡಿಸಿದ ವಿದ್ಯಾರ್ಹತೆ | ಒಟ್ಟು ಹುದ್ದೆ ಗಳು |
|---|---|---|---|---|
| 01 | ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ ವಿಭಾಗ | ಪ್ರಾಯೋಗಿಕ ಮತ್ತು ಥಿಯರಿ | ಅಂಗೀಕೃತ ವಿಶ್ವವಿದ್ಯಾನಿಲಯದಿಂದ **ಸಂಬಂಧಪಟ್ಟ ವಿಷಯದಲ್ಲಿ** ಸ್ನಾತಕೋತ್ತರ ಪದವಿ ಅಥವಾ ಪೋಸ್ಟ್ ಡಿಪ್ಲೊಮದಲ್ಲಿ (ಪಿ.ಜಿ ಡಿಪ್ಲೋಮಾ) ಕನಿಷ್ಟ ಶೇಖಡ 55 % ರಷ್ಟು ಅಂಕಗಳನ್ನು ಪಡೆದು ಉತ್ತೀರ್ಣ ರಾಗಿರಬೇಕು | 01 |
| 02 | Digital Fluency / Cyber Security / Artificial Intelligence (AI) | ಪ್ರಾಯೋಗಿಕ ಮತ್ತು ಥಿಯರಿ | ಅಂಗೀಕೃತ ವಿಶ್ವವಿದ್ಯಾನಿಲಯದಿಂದ M.Sc., (IT) ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇಕಡ 55 % ರಷ್ಟು ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು | 01 |

**ಆಯ್ಕೆ ಪ್ರಕ್ರಿಯೆ :** ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಿ ಮೆರಿಟ್ ಲಿಸ್ಟ್ ತಯಾರಿಸಲಾಗುವುದು.

| ಕ್ರ ಸಂ | ವಿದ್ಯಾರ್ಹತೆ | ಗರಿಷ್ಠ ಅಂಕ |
|---|---|---|
| 01 | **ವಿದ್ಯಾರ್ಹತೆ:** ಅಭ್ಯರ್ಥಿಯು ಎರಡು ವರ್ಷ ಸ್ನಾತಕೋತ್ತರ ಪದವಿಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ 25% ನ್ನು ಗಣನೆಗೆ ತೆಗೆದುಕೊಳ್ಳುವುದು (ಉದಾ: ಸ್ನಾತಕೋತ್ತರ ಪದವಿಯಲ್ಲಿ ಶೇಕಡ 60 ಅಂಕ ಪಡೆದಿದ್ದಲ್ಲಿ ಅದರ ಶೇಕಡ 25 ರಷ್ಟು ಅಂದರೆ 15 ಅಂಕಗಳು ಎಂಬುದಾಗಿ ಗಣನೆಗೆ ತೆಗೆದುಕೊಳ್ಳುವುದು). | 25 |
| 02 | **ಹೆಚ್ಚುವರಿ ವಿದ್ಯಾರ್ಹತೆ:**<br>1. ಪಿಹೆಚ್‌ಡಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>2. ಎನ್‌ಇಟಿ/ಕೆ-ಸೆಟ್/ಎಸ್‌ಎಲ್‌ಇಟಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>3. ಎಂ.ಫಿಲ್ ವಿದ್ಯಾರ್ಹತೆ ಪಡೆದಿದ್ದಲ್ಲಿ | <br>12<br>09<br>06 |
| 03 | **ಅನುಭವ:** ಹಿಂದಿನ ವರ್ಷಗಳಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಅವಧಿಗೆ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 16 ವರ್ಷಗಳಿಗೆ 48 ಅಂಕಗಳು (ಪ್ರತಿ ಶೈಕ್ಷಣಿಕ ವರ್ಷದ ಪೂರ್ಣ ಅವಧಿ ಸೇವೆಗೆ 3 ಅಂಕಗಳು, ಶೈಕ್ಷಣಿಕ ವರ್ಷದಲ್ಲಿ 1 ಸೆಮಿಸ್ಟರ್ ನಲ್ಲಿ ಮಾತ್ರ ಸೇವೆ ಸಲ್ಲಿಸಿದ್ದರೆ 1.5 ಅಂಕಗಳು, ಸೆಮಿಸ್ಟರ್ ನ 1 ತಿಂಗಳ ಸೇವಾ ಅವಧಿಗೆ 0.5 ಅಂಕ, 1 ತಿಂಗಳು ಮೇಲ್ಪಟ್ಟು 2 ತಿಂಗಳವರೆಗಿನ ಸೇವಾ ಅವಧಿಗೆ 1 ಅಂಕ ಹಾಗೂ 2 ತಿಂಗಳು ಮೇಲ್ಪಟ್ಟ ಸೇವಾ ಅವಧಿಗೆ 1.5 ಅಂಕಗಳು) | 48 |
| 04 | ವೈಯಕ್ತಿಕ ಸಂದರ್ಶನ | 10 |
| | **ಒಟ್ಟು** | **110** |

ಆಯ್ಕೆಯಾಗುವ ಅತಿಥಿ ಉಪನ್ಯಾಸಕರಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ನಿಗಧಿಪಡಿಸಿರುವ ರೂ. 13,000-00 ಗಳನ್ನು (ನೆಟ್ / ಸ್ಲೆಟ್ / ಪಿ.ಹೆಚ್.ಡಿ ಹೊಂದಿದ ಅಭ್ಯರ್ಥಿಗಳಿಗೆ) ಹಾಗೂ ರೂ. 11,000-00 ಗಳನ್ನು (ನೆಟ್ / ಸ್ಲೆಟ್ / ಪಿ.ಹೆಚ್.ಡಿ ಹೊಂದದ ಅಭ್ಯರ್ಥಿಗಳಿಗೆ) ಗೌರವ ಸಂಭಾವನೆಯನ್ನು ನಿಯಮಾನುಸಾರ ನೀಡಲಾಗುವುದು. ಮೇಲ್ಕಂಡ ವಿಷಯಗಳ ಸಂಬಂಧ ದಿನಾಂಕ 25-10-2023 ರ 5-30 ಗಂಟೆಯೊಳಗೆ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗಿದ್ದು, ದಿನಾಂಕ 26-10-2023 ರಂದು 11-00 ಗಂಟೆಗೆ ಸಂದರ್ಶನವನ್ನು ಸಂಸ್ಥೆಯಲ್ಲಿ ನಡೆಸಲಾಗುವುದು. ತರಗತಿಗಳು ಅನ್ವಯವಾಗುವಂತೆ ಕಾರ್ಯ ನಿರ್ವಹಿಸಲು ತಿಳಿಸಲಾಗುವುದು. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಂತರ್‌ಜಾಲ ವಿಳಾಸ www.mysore.nic.in ಮತ್ತು www.cavamysore.karnataka.gov.in ಅಂತರ್ಜಾಲದ ಮೂಲಕ ಮಾಹಿತಿಯನ್ನು ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಈ ಕಾರ್ಯಾಲಯದ ದೂರವಾಣಿ ಸಂಖ್ಯೆ 0821-2438931 ಯನ್ನು ಸಂಪರ್ಕಿಸಲು ಕೋರಿದೆ.

ಡೀನ್
ಕಾವಾ, ಮೈಸೂರು

ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜು
(ಕಾವಾ), ಮೈಸೂರು